ಸಂಖ್ಯೆ : ಕುವಿ/ಪವಿ/ಡಿಎಸ್-1/D1188 /2022-23

ರಿಜಿಸ್ಟ್ರಾರ್ (ಮೌಲ್ಯಮಾಪನ) ರವರ ಕಛೇರಿ
ಜ್ಞಾನಸಹ್ಯಾದ್ರಿ ಶಂಕರಘಟ್ಟ – 577451
ಶಿವಮೊಗ್ಗ ಜಿಲ್ಲೆ
ದಿನಾಂಕ: 15-07-2022

# ಅಧಿಸೂಚನೆ

ವಿಷಯ : 2019-20ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದ ದೂರಶಿಕ್ಷಣದ ಸ್ನಾತಕ ಪದವಿಯ ಪ್ರಥಮ ಮತ್ತು ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಹಾಗೂ ಸ್ನಾತಕೋತ್ತರ ಪದವಿಯ ಪ್ರಥಮ ವರ್ಷದ (ಪ್ರಥಮ ಮತ್ತು ದ್ವಿತೀಯ ಆವೃತ್ತಿ) ವಿದ್ಯಾರ್ಥಿಗಳನ್ನು ಪ್ರಮೋಟ್ ಮಾಡುವ ಬಗ್ಗೆ.

ಉಲ್ಲೇಖ :
1) ಯು.ಜಿ.ಸಿ. ಮಾರ್ಗಸೂಚಿ: D.O.No. F.1-1 / 2020(Secy), dt. 29th April 2020
2) ಸರ್ಕಾರದ ಆದೇಶ ಸಂಖ್ಯೆ: ED / 197 / UNE / 2020, Bangalore, ದಿನಾಂಕ: 10-07-2020
3) ಅಧಿಸೂಚನೆ ಸಂಖ್ಯೆ: ಕುವಿ / ಪವಿ / ಡಿಎಸ್-1 / ಡಿ2121 / 2021-22, ದಿನಾಂಕ: 07-02-2022
4) ತಿದ್ದುಪಡಿ ಅಧಿಸೂಚನೆ ಸಂಖ್ಯೆ: ಕುವಿ / ಪವಿ / ಡಿಎಸ್-1 / ಡಿ2155 / 2021-22, ದಿನಾಂಕ: 09-02-2022
5) ಅಧಿಸೂಚನೆ ಸಂಖ್ಯೆ: ಕುವಿ / ಪವಿ / ಡಿಎಸ್-1 / ಡಿ237 / 2022-23, ದಿನಾಂಕ:18-04-2022
6) ಸಿಂಡಿಕೇಟ್ ಸಭೆಯ ನಿರ್ಣಯ ದಿನಾಂಕ:02-06-2022
7) ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:14-07-2022

******

ವಿಶ್ವವಿದ್ಯಾಲಯದ ದೂರಶಿಕ್ಷಣದ ಕೋರ್ಸ್‌ಗಳಿಗೆ UGC (ODL) ರೆಗ್ಯೂಲೇಷನ್ 2017ರಂತೆ ಪ್ರವೇಶ ಪಡೆದಿರುವ 2019-20ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ ಪ್ರಥಮ ಮತ್ತು ದ್ವಿತೀಯ ವರ್ಷ ಹಾಗೂ ಸ್ನಾತಕೋತ್ತರ ಪದವಿಯ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ (ಪ್ರಥಮ ಮತ್ತು ದ್ವಿತೀಯ ಆವೃತ್ತಿ) ಪರೀಕ್ಷೆಗಳನ್ನು ನಡೆಸಬೇಕಾಗಿದ್ದು, ಈ ಸಂಬಂಧ ಹಲವು ಬಾರಿ ಪರೀಕ್ಷಾ ವೇಳಾಪಟ್ಟಿ ಅಧಿಸೂಚನೆಗಳನ್ನು ಹೊರಡಿಸಲಾಗಿರುತ್ತದೆ.

ಈ ಮಧ್ಯೆ ದಿನಾಂಕ:08-03-2022ರಂದು ನಡೆದ ಸಾಮಾನ್ಯ ಸಿಂಡಿಕೇಟ್ ಸಭೆಯ ನಿರ್ಣಯದಂತೆ ಹಾಗೂ ದಿನಾಂಕ:31-03-2022ರಂದು ನಡೆದ ವಿದ್ಯಾವಿಷಯಕ ಪರಿಷತ್ ಸಭೆಯ ನಿರ್ಣಯದಂತೆ ಉಲ್ಲೇಖ (3) & (4)ರಲ್ಲಿ ಮೇಲ್ಕಂಡ ವಿದ್ಯಾರ್ಥಿಗಳನ್ನು ಪ್ರಮೋಟ್ ಮಾಡಿರುವ ಕ್ರಮವನ್ನು ರದ್ದುಪಡಿಸಿ ಲಿಖಿತ ಪರೀಕ್ಷೆಗಳನ್ನು ನಡೆಸಲು ವೇಳಾಪಟ್ಟಿಯನ್ನು ಉಲ್ಲೇಖ (5)ರಲ್ಲಿ ಅಧಿಸೂಚನೆಯಲ್ಲಿ ಪ್ರಕಟಿಸಲಾಗಿತ್ತು.

ಆದರೆ, ಈ ಕ್ರಮವನ್ನು ಪ್ರಶ್ನಿಸಿ ಶ್ರೀ ಮಂಜುನಾಥ ಮತ್ತು ಇತರರು ಹಾಗೂ ಸುಜಲಾ ಕಾಲೇಜ್ ಆಫ್ ಕಾಮರ್ಸ್, ಹಾಸನ ಮತ್ತು ಇತರರು ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ರಿಟ್ ಅರ್ಜಿ ಸಂಖ್ಯೆ: 7776/2022 ಮತ್ತು 9699/2022ನ್ನು ಸಲ್ಲಿಸಿದ್ದು, ಈ ರಿಟ್ ಅರ್ಜಿಗಳಿಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ:01-06-2022ರಂದು ನೀಡಿರುವ ತೀರ್ಪಿನಲ್ಲಿ ಉಲ್ಲೇಖ (5)ರಂತೆ ಹಾಗೂ ಇತರೆ ಪೂರಕ ಕ್ರಮದಂತೆ ಪರೀಕ್ಷೆಗಳನ್ನು ನಡೆಸುವ ಕ್ರಮವನ್ನು ರದ್ದುಪಡಿಸಿ ಉಲ್ಲೇಖ (3) ಮತ್ತು (4)ರಲ್ಲಿ ವಿದ್ಯಾರ್ಥಿಗಳನ್ನು ಪ್ರಮೋಟ್ ಮಾಡಿರುವ ಕ್ರಮವನ್ನು ಎತ್ತಿಹಿಡಿದಿರುತ್ತದೆ.

ಪು.ತಿ.ನೊ.

ನ್ಯಾಯಾಲಯದ ತೀರ್ಪಿನ ಅನುಷ್ಠಾನದ ಕುರಿತು ಉಲ್ಲೇಖ (6)ರಲ್ಲಿ ಸಿಂಡಿಕೇಟ್ ಸಭೆಗಳಲ್ಲಿ ಚರ್ಚಿಸಲಾಗಿರುತ್ತದೆ. ಈ ಸಂಬಂಧ ದಿನಾಂಕ:11-07-2022ರಂದು ದೂರಶಿಕ್ಷಣದ ಮೇಲ್ವಿಚಾರಣೆ ಸಮಿತಿ ಸಭೆಯಲ್ಲಿ "ಈ ಹಿಂದೆ ಆಂತರಿಕ ಅಂಕಗಳ ಆಧಾರದ ಮೇಲೆ ಪ್ರಕಟಿಸಲಾದ ಫಲಿತಾಂಶವನ್ನು ಪ್ರಕಟಿಸಲು" ನಿರ್ಣಯಿಸಲಾಗಿದೆ. ಇದರಂತೆ ಉಲ್ಲೇಖ (3) ಮತ್ತು (4)ರಂತೆ ಆಂತರಿಕ ಅಂಕಗಳ ಆಧಾರದ ಮೇಲೆ ವಿದ್ಯಾರ್ಥಿಗಳನ್ನು ಪ್ರಮೋಟ್ ಮಾಡಿರುವ ಕ್ರಮವನ್ನು ಅಂಗೀಕರಿಸಿ ಅನುಷ್ಠಾನಗೊಳಿಸಲಾಗಿದೆ.

ಆದೇಶದ ಮೇರೆಗೆ

15/7/2022

ಕುಲಸಚಿವರು (ಪರೀಕ್ಷಾಂಗ)

ಕುಲಸಚಿವರು (ಪರೀಕ್ಷಾಂಗ)
ಕುವೆಂಪು ವಿಶ್ವವಿದ್ಯಾಲಯ
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ - 577 451.

ಗೆ,

1. ನಿರ್ದೇಶಕರು, ದೂರಶಿಕ್ಷಣ ನಿರ್ದೇಶನಾಲಯ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ ಎಲ್ಲಾ ದೂರಶಿಕ್ಷಣ ಅಧ್ಯಯನ ಕೇಂದ್ರಗಳ ಸಂಯೋಜನಾಧಿಕಾರಿಗಳಿಗೆ
3. ತಾಂತ್ರಿಕ ಸಹಾಯಕರು, ಕಂಪ್ಯೂಟರ್ (ಪರೀಕ್ಷಾಂಗ) ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
4. ಸಂಯೋಜಕರು, ಹೊರಗುತ್ತಿಗೆ ಪರೀಕ್ಷಾಂಗ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.

ಪ್ರತಿಗಳು:

1. ಆಪ್ತ ಕಾರ್ಯಾಲಯ ಮಾನ್ಯ ಕುಲಪತಿಗಳು/ಕುಲಸಚಿವರು (ಪರೀಕ್ಷಾಂಗ), ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ಉಪಕುಲಸಚಿವರು/ಸಹಾಯಕ ಕುಲಸಚಿವರು/ಶಾಖಾಧಿಕಾರಿಗಳು, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
3. ವಿಷಯ ನಿರ್ವಾಹಕರು, ಪರೀಕ್ಷಾ ವಿಭಾಗ (ದೂರಶಿಕ್ಷಣ), ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
4. ಕಛೇರಿ ಪ್ರತಿ.